ಕೈಗೆತ್ತಿಕೊಳ್ಳಲಾಗಿದೆ. ಅದೇ ರೀತಿ ಇದೇ ತಾಲ್ಲೂಕುಗಳಲ್ಲಿ 45 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. ಲಸಿಕಾ ಕಾರ್ಯಕ್ರಮವು ಯಶಸ್ವಿಯಾಗುವಂತೆ ಮೇಲ್ವಿಚಾರಣೆಯನ್ನು ಬಿಗಿಗೊಳಿಸಲಾಗಿದೆ.

ಈ) ಬಂದಿದೆ.

ಉ) ಈಗಾಗಲೇ ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಗುತ್ತಿಗೆ ಆಧಾರದ ಮೇಲೆ ವೈದ್ಯರನ್ನು ನೇಮಿಸಿಕೊಳ್ಳಲು ಸೂಚಿಸಿದ್ದು, ಅದರಂತೆ ನೇಮಿಸಿಕೊಳ್ಳಲಾಗುತ್ತಿದೆ. ರಾಜ್ಯಮಟ್ಟದಲ್ಲಿಯೂ ಸಹ ಸಂದರ್ಶನ ಕರೆದು ಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳುವ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆ. ಇತರೆ ಅರೆ ವೈದ್ಯಕೀಯ ಸಿಬ್ಬಂದಿಗಳನ್ನು ಸಹ ಈಗಾಗಲೇ ನೇರ ನೇಮಕಾತಿ ಹಾಗೂ ಬ್ಯಾಕಲಾತಿಯಲ್ಲಿ ನೇಮಿಸಿಕೊಳ್ಳಲಾಗಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಎಲ್ಲಿ ಕಟ್ಟಡಗಳಿಲ್ಲವೋ ಅಂತಹ 85 ಕೇಂದ್ರಗಳಿಗೆ ಆರ್.ಐ.ಡಿ.ಎಫ್. 8ರಡಿಯಲ್ಲಿ ಕಟ್ಟಡಗಳನ್ನು ಕಟ್ಟಲಾಗಿದೆ. ಆರ್.ಐ.ಡಿ.ಎಫ್. 10 ಹಾಗೂ 11 ರಡಿಯಲ್ಲಿ ಇನ್ನೂ 94 ಕೇಂದ್ರಗಳಿಗೆ ಕಟ್ಟಡಗಳನ್ನು ಕಟ್ಟಲು ಪ್ರಸ್ತಾಪಿಸಲಾಗಿದೆ. ಮುಂಬರುವ ಹೆಚ್. ಎನ್. ಪಿ. ಯೋಜನೆಯಲ್ಲಿಯೂ ಸಹ ಸುಮಾರು 50 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಟ್ಟಡಗಳನ್ನು ಕಟ್ಟಲು ಪ್ರಸ್ತಾಪಿಸಲಾಗಿದೆ. ಪ್ರಧಾನಮಂತ್ರಿ ಗ್ರಾಮೋದಯ ಯೋಜನೆಯಡಿಯಲ್ಲಿ ಕಳೆದ ಮೂರು ವರ್ಷಗಳಿಂದ ಉಪ ಕೇಂದ್ರ ಪ್ರಾಥಮಿಕ ಆರೋಗ್ಯ ಘಟಕ, ಆರೋಗ್ಯ ಕೇಂದ್ರ ಹಾಗೂ ವಸತಿ ಗೃಹಗಳ ದುರಸ್ತಿ, ವಿದ್ಯುತ್‌ಚ್ಛಕ್ತಿ ಹಾಗೂ ನೀರು ಪೂರೈಕೆ, ವೆಸ್ಟ ಮ್ಯಾನೇಜ್‌ಮೆಂಟ್, ಹೆಚ್ಚುವರಿ ಔಷಧಿ ಪೂರೈಕೆ ಕೆಲವು ಅವಶ್ಯವಿರುವ ಸಾಧನ ಸಾಮಗ್ರಿಗಳ ಪೂರೈಕೆ ಇಂತಹ ಕೆಲಸಗಳನ್ನು ಕೈಗೊಳ್ಳಲಾಗಿದೆ. ಕೇಂದ್ರಗಳ ಬೇಡಿಕೆಗಳಿಗನುಗುಣವಾಗಿ ನಿಗದಿಪಡಿಸಿದಂತೆ ಔಷಧಿಗಳನ್ನು ಸರಬರಾಜು ಮಾಡಲಾಗಿದೆ. 13 ಜಿಲ್ಲಾ ಆಸ್ಪತ್ರೆಗಳಿಗೆ ಸಿಟಿಸ್ಕ್ಯಾನ್ ಯಂತ್ರಗಳನ್ನು ಹಾಗೂ 27 ಜಿಲ್ಲೆಗಳಿಗೆ ಹೊಸದಾಗಿ ಆಂಬ್ಯುಲೆನ್ಸ್ ವಾಹನಗಳನ್ನು ಪೂರೈಕೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ 13 ಜಿಲ್ಲೆಗಳಲ್ಲಿ ಕಾರ್ಯಾರಂಭ ಮಾಡುತ್ತಿರುವ ಟೆಲಿಮೆಡಿಸಿನ್ ಯೋಜನೆಯನ್ನು ಇನ್ನಿತರ ಜಿಲ್ಲೆಗಳಿಗೂ ಸಹ ವಿಸ್ತರಿಸಲಾಗುತ್ತಿದೆ.

5806 (6497) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಚಾಮರಾಜನಗರ ಜಿಲ್ಲೆಯಲ್ಲಿ ರಸ್ತೆಗಳು ತೀವ್ರ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಗ್ರಾಮೀಣ ಪ್ರದೇಶಗಳ ರಸ್ತೆಗಳ ದುರಸ್ತಿ ಕಾರ್ಯಗಳನ್ನು ಸರ್ಕಾರ ಕೈಗೊಳ್ಳುವ ಬಗ್ಗೆ ಚಿಂತನೆ ಮಾಡಿದೆಯೇ;

ಇ) ಹಿಂದುಳಿದ ಗಡಿ ಪ್ರದೇಶದ ರಸ್ತೆಗಳ ಅಭಿವೃದ್ಧಿ ಬಗ್ಗೆ ವಿಶೇಷವಾದ ಗಮನವನ್ನು ಸರ್ಕಾರ ಕೈಗೊಂಡಿದೆಯೇ;

ಡಾ॥ ಹೆಚ್. ಸಿ. ಮಹದೇವಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು)

ಅ) ಹೌದು.

ಆ) ಹೌದು.

ಇ) ಕೇಂದ್ರ ನೆರವಿನ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ, ನಬಾರ್ಡ್ ನೆರವಿನ ಯೋಜನೆ, ರಾಜ್ಯ ಸರ್ಕಾರದ ನೆರವಿನ ಯೋಜನೆಯಾದ ಲೆಕ್ಕ ಶೀರ್ಷಿಕೆ – 3054 – ಜಿಲ್ಲಾ ಪಂಚಾಯಿತಿಗಳಿಗೆ ಸಹಾಯಾನುದಾನ, 5054 ಗ್ರಾಮೀಣ ರಸ್ತೆ ಮತ್ತು ಸೇತುವೆ ನಿರ್ಮಾಣ, ಇತ್ಯಾದಿ ಯೋಜನೆಗಳಡಿಯಲ್ಲಿ ಹಿಂದುಳಿದ ಗಡಿ ಪ್ರದೇಶದ ರಸ್ತೆಗಳನ್ನು ಆದ್ಯತೆ ಮೇರೆಗೆ ಹಾಗೂ ಅನುದಾನಕ್ಕನುಗುಣವಾಗಿ ಅಭಿವೃದ್ಧಿಗೊಳಿಸಲಾಗುವುದು.